# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:21.05.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.16 ಜಾಲಹಳ್ಳಿಯಲ್ಲಿ ಶ್ರೀ ಹೆಚ್. ಎಸ್. ದಯಾನಂದ, (ಸ.ಕಾ.ನಿ.ಅ,ಕೆಂಗೇರಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಹೆಚ್. ಎಸ್. ದಯಾನಂದ | ಸ.ಕಾ.ನಿ.ಅ., ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಪೂಜಾಶ್ರೀ ಆರ್. | ಸಹಾಯಕ ಅಭಿಯಂತರರು, |
| 3 | ಎಂ. ಅನಿತಾ ರಾಜ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ ವೇಣು. | ಕಂದಾಯ ವಸೂಲಿಗಾರರು |
| 5 | ಶ್ರೀ ಕಾರ್ತಿಕ್ ಮಂಜು ವಿ. | ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ |
| 6 | ಶ್ರೀ ರೋಹಿತ್ ಎಂ. ನೇತ್ರೇಕರ್ | ಸಹಾಯಕ ಅಭಿಯಂತರರು , ಬೆಸ್ಕಾಂ |
| 7 | ಶ್ರೀ ಶ್ರೀನಿವಾಸ | ಮೇಲ್ವಿಚಾರಕರು |
| 8 | ಶ್ರೀ ನಾಗರಾಜ್ | ಮೇಲ್ವಿಚಾರಕರು |
| 9 | ಶ್ರೀ ನವೀನ್ ಆರ್. | ವಾರ್ಡ್ ಮಾರ್ಷಲ್ |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಬೆಸ್ಕಾಂ & ಬಿಡಬ್ಲ್ಯೂಎಸ್ಎಸ್‌ಬಿ:-**

ಬೆಸ್ಕಾಂ & ಬಿಡಬ್ಲ್ಯೂಎಸ್ಎಸ್‌ಬಿ ರವರಿಗೆ ತಮ್ಮ ಇಲಾಖೆಯಿಂದ ಮಾಡಿದ ರಸ್ತೆ ಅಗೆತದ ಕಾಮಗಾರಿ ನಂತರ ರೆಸ್ಟೋರೇಷನ್ ಮಾಡಲು ತಿಳಿಸಿದರು. ಈ ಕುರಿತಂತೆ, ಬೆಸ್ಕಾಂ, ಬಿಡಬ್ಲ್ಯೂ ಎಸ್ಎಸ್‌ಬಿ ಹಾಗೂ ಜಿಯೋ ಕಂಪನಿಯವರಿಗೆ ಅಗೆದ ರಸ್ತೆಗಳನ್ನು ರೆಸ್ಟೋರೇಷನ್ ಮಾಡಬೇಕೆಂದು ಪತ್ರ ಬರೆಯಲು ತಿಳಿಸಿದರು.

**2) ಕಾಮಗಾರಿ ಇಲಾಖೆ:**

ರಸ್ತೆ ಗುಂಡಿಗಳನ್ನು ಪರಿಶೀಲಿಸಿ, ಮುಚ್ಚಲು ಕ್ರಮವಹಿಸಲು ಸೂಚಿಸಿದರು. ಸಿಲ್ಟ್ & ಟ್ರ್ಯಾಕ್ಟರ್ ಅಡಿಯಲ್ಲಿ ಚರಂಡಿಗಳಲ್ಲಿನ ಹೂಳೆತ್ತಲು ಕ್ರಮವಹಿಸುವುದಾಗಿ ಕಾರ್ಯಪಾಲಕ ಅಭಿಯಂತರರು ದೂರವಾಣಿ ಮುಖೇನ ತಿಳಿಸಿದರು.

3) **ಘನತ್ಯಾಜ್ಯ ವಿಭಾಗ:-**

- **ಪೌರ ಕಾರ್ಮಿಕ ಸಿಬ್ಬಂದಿ ಕೊರತೆ ಬಗ್ಗೆ:**

ಪೌರ ಕಾರ್ಮಿಕರು ವಯೋನಿವೃತ್ತಿ ಮತ್ತು ಮರಣ ಹೊಂದಿರುವ ಹಿನ್ನಲೆಯಲ್ಲಿ ವಾರ್ಡ್ ಪರಿಮಿತಿಯಲ್ಲಿ ಪೌರ ಕಾರ್ಮಿಕರ ಕೊರತೆ ಉಂಟಾಗಿದ್ದು, ವಾರ್ಡ್ ಪರಿಮಿತಿಯಲ್ಲಿ ಕಸದ ವಿಲೇವಾರಿಗೆ ಸಮಸ್ಯೆ ಉಂಟಾಗುತ್ತಿರುತ್ತದೆ. ಆದ್ದರಿಂದ ತೆರವಾಗಿರುವ ಸ್ಥಾನಕ್ಕೆ ಬದಲೀ ಸಿಬ್ಬಂದಿಯನ್ನು ನಿಯೋಜಿಸಿಕೊಡಲು ಕೋರಿದರು.

ಆಟೋಗಳ ಕೊರತೆಯಿದ್ದು, ಒಂದು ಆಟೋಗೆ ಒಬ್ಬ ಡ್ರೈವರ್ ಮತ್ತು ಒಬ್ಬ ಹೆಲ್ಪರ್ ನಿಯೋಜಿಸಿಕೊಡಬೇಕೆಂದು ಅಧ್ಯಕ್ಷರಲ್ಲಿ ಮನವಿ ಮಾಡಿದರು. ಅದಕ್ಕೆ ಅಧ್ಯಕ್ಷರು ಮಾತನಾಡಿ, ತಮ್ಮಲ್ಲಿ ಲಭ್ಯವಿರುವ ಪೌರ ಕಾರ್ಮಿಕರ ಸಹಯೋಗದೊಂದಿಗೆ ವಿಂಗಡಣೆ ಮಾಡಲು ಸೂಚಿಸಿದರು.

ಖಾತಾ ನಗರ ಮತ್ತು ಸಿದ್ದಾರ್ಥನಗರ ಸ್ಲಂಗಳಲ್ಲಿ ಪೌರ ಕಾರ್ಮಿಕರ ಕೊರತೆಯಿದ್ದು, ವಾರಕ್ಕೊಮ್ಮೆ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಂಡು, ಸ್ಲಂ ಪ್ರದೇಶವನ್ನು ಶುಚಿಯಾಗಿಡಲು ಸೂಚಿಸಿದರು.

ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ವಿಭಾಗ ರವರು ಸೂಕ್ತ ಕ್ರಮಕೈಗೊಳ್ಳಬೇಕೆಂದು ತಿಳಿಸಿದರು.

4) **ಬೀದಿ ದೀಪಗಳ ಬಗ್ಗೆ :-**

ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಪ್ರದೇಶಗಳಲ್ಲಿ ಬೀದಿ ದೀಪಗಳು ರಿಪೇರಿ ಇದ್ದು, ಕಾರ್ಯನಿರ್ವಹಣೆಯನ್ನು ಪರಿವೀಕ್ಷಿಸಿ, ಸರಿಪಡಿಸಲು ಸಂಬಂಧಪಟ್ಟವರಿಗೆ ಸೂಚಿಸಲಾಯಿತು.

ಕೊನೆಯದಾಗಿ, ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Poojashree.R
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:16

**(ಹೆಚ್. ಎಸ್. ದಯಾನಂದ)**
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:16